**ಪ್ರಧಾನ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ**

**ಸಿಸಿ ನಂ. 731/2022**

| | | | |
|---|---|---|---|
| **ಹೆಸರು** | **:** | **ಅಶೋಕರೆಡ್ಡಿ** | ಚಾ.ಸಾ. 6 |
| **ತಂದೆಯ ಹೆಸರು** | **:** | **ಹನುಮಂತರೆಡ್ಡಿ** | ಪ್ರಾ.ಸಾ. 3 |
| **ವಯಸ್ಸು** | **:** | **56 ವರ್ಷ** | ದಿನಾಂಕಃ 09-09-2024 |
| **ಉದ್ಯೋಗ** | **:** | **ಒಕ್ಕಲುತನ** | |
| **ವಾಸಸ್ಥಳ** | **:** | **ನಾಗಇದಲಾಯಿ** | |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ**

ಚಾಸಾ 21 ರವರು ನನಗೆ ಗೊತ್ತು. ನ್ಯಾಯಾಲಯದ ಮುಂದೆ ಇರುವ ಆರೋಪಿ ನನಗೆ ಗೊತ್ತು.

ಈಗ ನೋಡುತ್ತಿರುವ ದಾಖಲೆಯ ಮೇಲೆ ನನ್ನ ಸಹಿ ಇದ್ದು ಸದರಿ ದಾಖಲೆಯನ್ನು ನಿಪಿ-3 ಎಂದು ಮತ್ತು ಅದರಲ್ಲಿರುವ ನನ್ನ ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು.

ಈಗೆ 3 ವರ್ಷಗಳ ಹಿಂದೆ ಪೋಲಿಸ ಠಾಣೆಯ ಹತ್ತಿರ ಇರುವ ಹೋಟೆಲನಲ್ಲಿ ಚಹಾಕುಡಿಯುತ್ತಾ ಕುಳಿತಾಗ ಪೋಲಿಸರು ಸಹಿ ಮಾಡು ಎಂದು ಹೇಳಿದ್ದಕ್ಕೆ ನಿಪಿ-3 ರಲ್ಲಿ ಸಹಿ ಮಾಡಿದ್ದೇನೆ. ಯಾವ ಕಾರಣಕ್ಕಾಗಿ ಸಹಿ ಪಡೆದರು ಎಂದು ನನಗೆ ಗೊತ್ತಿಲ್ಲ. ನಿಪಿ-3 ರ ಸಂಗತಿಗಳು ನನಗೆ ಗೊತ್ತಿಲ್ಲ. ಪೋಲಿಸರು ನನಗೆ ನಿಪಿ-3 ರ ಸಂಗತಿಗಳನ್ನು ಓದಿ ಹೇಳಿಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ವಸ್ತುಗಳನು ಜಪ್ತಿ ಮಾಡಿಲ್ಲ.

(ಈ ಹಂತದಲ್ಲಿ ತನಿಖಾಧಿಕಾರಿಯವರ ಮುಂದೆ ಸಲ್ಲಿಸಿರುವ ಪಂಚನಾಮೆಗೆ ಈ ಸಾಕ್ಷಿ ಭಾಗಶಃ ಪ್ರತಿಕೂಲ ಸಾಕ್ಷ್ಯ ನುಡಿಯುತ್ತಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೊಡುವಂತೆ ಸ.ಸ.ಅ.ರವರು ಅನುಮತಿ ಕೋರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದಃ**

ದಿನಾಂಕಃ 07-12-2021 ರಂದು ಬೆಳಿಗ್ಗೆ 11-30 ಗಂಟೆಗೆ ಪೋಲಿಸರು ಈಗ ನೋಡುತ್ತಿರುವ ಭಾವಚಿತ್ರದಲ್ಲಿರುವ ಟ್ರಾಕ್ಟರನ್ನು ಜಪ್ತಿ ಮಾಡಿಕೊಂಡು ಜಪ್ತಿ ಪಂಚನಾಮೆ ಬರೆದು, ನನ್ನ ಸಹಿ ಪಡೆದಿದ್ದಾರೆ ಎಂದರೆ ನನಗೆ ಗೊತ್ತಿಲ್ಲ. ಆರೋಪಿ ನಮ್ಮ ಊರಿನವನಾದ ಕಾರಣ ಅವನ ಮಾತುಕೇಳಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿ ಪರವಾಗಿ ಶ್ರೀ MSS ವಕೀಲರಿಂದಃ ಇಲ್ಲಾ.</u>**

**ಮರುವಿಚಾರಣೆಃ ಇಲ್ಲಾ.**

**(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**
**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಪ್ರ.ದ.ನ್ಯಾ.ದಂ. ಚಿಂಚೋಳಿ**